ಕರ್ನಾಟಕ ರಾಜ್ಯದಲ್ಲಿ ಒಟ್ಟು ಅಂದಾಜು 22 ಲಕ್ಷ ಮನೆಗಳು ವಿದ್ಯುದ್ದೀಕರಣ ಹೊಂದಿಲ್ಲದೆ ಇರುತ್ತವೆ.

ಮೇಲೆ ತಿಳಿಸಿದ ವಿವರಗಳಲ್ಲಿ ಮೈಸೂರು ಚಾಮರಾಜನಗರ ಮತ್ತು ಉತ್ತರ ಕನ್ನಡ ಜಿಲ್ಲೆಯ 18 ಗ್ರಾಮಗಳು ಮತ್ತು ಉತ್ತರ ಕನ್ನಡ ಜಿಲ್ಲೆಯ 8 ಮಜಿರೆಗಳನ್ನು ಸೌರಶಕ್ತಿಯಿಂದ ವಿದ್ಯುದ್ದೀಕರಣಗೊಳಿಸಲು ಅಸಂಪ್ರದಾಯಿಕ ಇಂಧನಮೂಲಗಳ ಮಂತ್ರಾಲಯ ನವದೆಹಲಿ, ಇವರಿಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ. ಅವರಿಂದ ಅನುಮತಿ ಬಂದ ಕೂಡಲೇ ಈ ಕಾರ್ಯವನ್ನು 2004–05ನೇ ಸಾಲಿನಲ್ಲಿಯೇ ತೆಗೆದುಕೊಳ್ಳಲಾಗುವುದು.

707(97) : ಶ್ರೀ ಬಸವರಾಜು ಎ.ಎಸ್. (ಅರಸೀಕೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಂದಾಯ ಭೂಮಿ ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಚಿಂತಿಸುತ್ತಿದೆಯೇ; ತಿದ್ದುಪಡಿ ತರಲು ಕಾರಣಗಳೇನು;

ಆ) ಯಾವ ಯಾವ ವಿಚಾರಗಳಿಗೆ ಸಂಬಂಧಪಟ್ಟಂತೆ ತಿದ್ದುಪಡಿ ತರಲಾಗುವುದು;

ಇ) ಈ ರೀತಿ ತಿದ್ದುಪಡಿ ಮಾಡುವುದರಿಂದ ರೈತರು ಈಗಾಗಲೇ ಸಾಗುವಳಿ ಮಾಡುತ್ತಿರುವ ಭೂಮಿಯನ್ನು ಸರ್ಕಾರ ವಶಪಡಿಸಿಕೊಳ್ಳಬಹುದೆ;

ಈ) ಇದರಿಂದ ರೈತರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ?

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು)

ಅ) ಇಲ್ಲ. ಉದ್ಭವಿಸುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

708(99) ಶ್ರೀ ಬಸವರಾಜು ಎ.ಎಸ್. (ಅರಸೀಕೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮುಜರಾಯಿ ಕಾನೂನಿಗೆ ತಿದ್ದುಪಡಿ ತರಲು ಸರ್ಕಾರ ನಿರ್ಧರಿಸಿದೆಯೇ; ತಿದ್ದುಪಡಿಗೆ ಕಾರಣಗಳೇನು;

ಆ) ಯಾವ ವಿಚಾರಕ್ಕೆ ಸಂಬಂಧಪಟ್ಟಂತೆ ತಿದ್ದುಪಡಿ ತರಲಾಗುವುದು;

ಇ) ಹಾಲಿ ಇರುವ ಕಾನೂನಿನ ಚೌಕಟ್ಟಿನೊಳಗೆ ಬಡ ದೇವಸ್ಥಾನಗಳನ್ನು ಅಭಿವೃದ್ಧಿಗೊಳಿಸಲು ಸಾಧ್ಯವಿಲ್ಲವೇ;

ಈ) ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು)

ಅ) ಪರಿಶೀಲನೆಯಲ್ಲಿರುತ್ತದೆ. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997ನ್ನು ಸಮರ್ಪಕವಾಗಿ ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಉಂಟಾಗಿರುವ ತೊಂದರೆಗಳನ್ನು ನಿವಾರಿಸುವ ದೃಷ್ಟಿಯಿಂದ ತಿದ್ದುಪಡಿ ತರಲು ಉದ್ದೇಶಿಸಿದೆ;

ಆ) ಈ ಕೆಳಕಂಡ ವಿಚಾರಗಳಿಗೆ ಸಂಬಂಧಿಸಿದಂತೆ ತಿದ್ದುಪಡಿ ತರಲು ಪರಿಶೀಲಿಸಲಾಗುತ್ತಿದೆ:–

ಒಂದು ಪಂಗಡಕ್ಕೆ ಸೇರಿದ ಹಿಂದೂ ಧಾರ್ಮಿಕ ಸಂಸ್ಥೆಗಳ ವ್ಯಾಖ್ಯಾನ ರೂಪಿಸುವ ಕುರಿತು. ದೇವಾಲಯದ ನೌಕರರ ವಿರುದ್ದ ಶಿಸ್ತು ಕ್ರಮ ಜರುಗಿಸುವ ಕುರಿತು, ಸಾಮಾನ್ಯ ಸಂಗ್ರಹಣಾ ನಿಧಿ ವ್ಯವಹರಣೆ, ಬಾಂಬೆ ಪಬ್ಲಿಕ್ ಟ್ರಸ್ಟ್ ಆಕ್ಟ್ 1950ಕ್ಕೆ ಒಳಪಟ್ಟ ಪ್ರದೇಶಗಳ ಸಂಸ್ಥೆಗಳನ್ನು ಅಧಿನಿಯಮ 1997ರಡಿ ಅಧಿಸೂಚಿತ ಸಂಸ್ಥೆಗಳ ಘೋಷಣೆ, ಆಡಳಿತ ಮಂಡಳಿ ರಚನೆ ಕುರಿತು. ಆಡಳಿತಾಧಿಕಾರಿ ಅವಧಿ ಕುರಿತು, ಶಿಕ್ಷಣ ಸಂಸ್ಥೆಗಳ ಸ್ಥಾಪನೆ ಮತ್ತು ನಿರ್ವಹಣೆ, ಶೈಕ್ಷಣಿಕ, ಧಾರ್ಮಿಕ ದತ್ತಿ ಶಿಕ್ಷಣ, ಆರೋಗ್ಯ ಮತ್ತಿತರ ಚಟುವಟಿಕೆಗಳಿಗೆ ದೇವಾಲಯದ ನಿಧಿ ಬಳಸುವ ಬಗ್ಗೆ, ದೇವಾಲಯದ ಅಭಿವೃದ್ಧಿ ಸಮಿತಿ, ಧಾರ್ಮಿಕ ಸಂಸ್ಥೆಗಳನ್ನು ದತ್ತು ಪಡೆಯುವ ಬಗ್ಗೆ ಮತ್ತು ಗುತ್ತಿಗೆ ಅವದಿಯ ಕುರಿತು.

ಇ) ವಾರ್ಷಿಕ ರೂ. 5,000 ಗಳಿಗಿಂತ ಕಡಿಮೆ ಆದಾಯವುಳ್ಳ ಅಧಿಸೂಚಿತ ಸಂಸ್ಥೆಯನ್ನು ಅಧಿಕ ಆದಾಯವುಳ್ಳ ಬೇರೊಂದು ಅಧಿಸೂಚಿತ ಸಂಸ್ಥೆಯು ದತ್ತು ತೆಗೆದುಕೊಂಡು ಅಭಿವೃದ್ಧಿಪಡಿಸಲು ಕಾಯಿದೆಯಲ್ಲಿ ಅವಕಾಶ ಇದೆ.

ಈ) ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಪ್ರಶ್ನೆ ಉದ್ಭವಿಸುವುದಿಲ್ಲ.

710(1378) : ಶ್ರೀ ಬಸವರಾಜು ಹೆಚ್.ಡಿ. (ವಿರಾಜಪೇಟೆ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಿಗೆ (ಕೆ.ಪಿ.ಟಿ.ಸಿ.ಎಲ್) ಕಳೆದ ಮೂರು ವರ್ಷಗಳಿಂದ ಗೃಹ ಬಳಕೆ ಹಾಗೂ ವಾಣಿಜ್ಯ ಕೈಗಾರಿಕೆಗಳಿಂದ ಬರಬೇಕಾಗಿರುವ ಬಾಕಿ ಮೊತ್ತ ಎಷ್ಟು (ಜಿಲ್ಲಾವಾರು ಹಾಗೂ ಕೊಡಗು ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು);

ಆ) ಬರಬೇಕಾದ ಬಾಕಿ ಮೊತ್ತವನ್ನು ಪಡೆಯಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ;

ಇ) ಪಾವತಿಸದಿರುವವರ ವಿರುದ್ಧ ಸರ್ಕಾರದ ಕ್ರಮಗಳೇನು;

ಈ) ಇದರಿಂದಾಗಿ ಕೆ.ಪಿ.ಟಿ.ಸಿ.ಎಲ್.ಗೆ ನಷ್ಟವಾಗುತ್ತಿರುವ ಮೊತ್ತವೆಷ್ಟು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ರಾಜ್ಯದಲ್ಲಿರುವ ನಾಲ್ಕು ವಿದ್ಯುತ್ ಸರಬರಾಜು ಕಂಪನಿಗಳಿಗೆ ಕಳೆದ ಮೂರು ವರ್ಷಗಳಿಂದ ಗೃಹ ಬಳಕೆ, ವಾಣಿಜ್ಯ ಹಾಗೂ ಕೈಗಾರಿಕೆಗಳಿಂದ ಬರಬೇಕಿರುವ ಬಾಕಿ ಮೊತ್ತದ ವಿದ್ಯುತ್ ಸರಬರಾಜು ಕಂಪನಿವಾರು ವಿವರಗಳನ್ನು ಅನುಬಂಧ–1ರಲ್ಲಿ ಹಾಗೂ ಜಿಲ್ಲಾವಾರು ವಿವರಗಳನ್ನು ಮತ್ತು ಕೊಡಗು ಜಿಲ್ಲೆಯ ತಾಲ್ಲೂಕುವಾರು ಬಾಕಿಯ ವಿವರಗಳನ್ನು ಅನುಬಂಧ–2 ಒದಗಿಸಲಾಗಿದೆ.

ಆ) ಬರಬೇಕಾದ ಬಾಕಿ ಮೊತ್ತವನ್ನು ವಸೂಲಿ ಮಾಡಲು ಹಾಗೂ ಬಿಲ್ ಪಾವತಿಸದಿರುವವರ ವಿರುದ್ದ ವಿದ್ಯುತ್ ಸರಬರಾಜು ಕಂಪನಿಗಳು ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡಿರುತ್ತವೆ.

ಇ) 1.ಕೆ.ಇ.ಆರ್.ಸಿ. ಸಪ್ಲೈ ಅಂಡ್ ಡಿಸ್ಟ್ರಿಬ್ಯೂಷನ್ ಕೋಡ್ 2000–01ರ ನಿಯಮ 29.07(ಅ) ರ ಪ್ರಕಾರ ಬಿಲ್ ನೀಡಿದ 15 ದಿನಗಳೊಳಗೆ ಹಣವನ್ನು ಪಾವತಿಸದಿದ್ದಲ್ಲಿ 7 ದಿನಗಳ ನೋಟೀಸ್ ಜಾರಿ ಮಾಡಿ. ಆಗಲೂ ಹಣ ಸಂದಾಯ ಮಾಡದಿದ್ದಲ್ಲಿ ಸ್ಥಾವರ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗುವುದು.